**All India Radio: Bangalore**
**National Bulletin In Kannada**
**06.06.2026 1.10 p.m.**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**06.06.2026 1.10 p.m.**
**<><><><>**

ಮುಖ್ಯಾಂಶಗಳು

1. ದೆಹಲಿಯಲ್ಲಿಂದು ಮೈ ಭಾರತ್ ಯುವ ಸಮಾವೇಶ ಆರಂಭ: ಆರು ಸಾವಿರಕ್ಕೂ ಹೆಚ್ಚು ಯುವಕರು ಭಾಗಿ
2. ಭಾರತ, ಅತ್ಯಂತ ವೇಗವಾಗಿ ಬೆಳೆಯುತ್ತಿರುವ ವಿಶ್ವದ ಪ್ರಮುಖ ಆರ್ಥಿಕತೆಯಾಗಿ ಗುರುತಿಸಿಕೊಳ್ಳುತ್ತಿದೆ - ರಾಜನಾಥ್ ಸಿಂಗ್
3. ಭಾರತ - ಅಮೆರಿಕ ಸೇನಾ ಸಿಬ್ಬಂದಿ ಮಾತುಕತೆ; ದ್ವಿಪಕ್ಷೀಯ ರಕ್ಷಣಾ ಸಹಕಾರಕ್ಕೆ ಒತ್ತು
4. ಗ್ರ್ಯಾಂಡ್ ಮಾಸ್ಟರ್ ಪ್ರಜ್ಞಾನಂದಗೆ ನಾರ್ವೆ ಚೆಸ್ ಪ್ರಶಸ್ತಿ: ಈ ಗೌರವಕ್ಕೆ ಪಾತ್ರರಾದ ಮೊದಲ ಭಾರತೀಯ

<><><><>

ಯುವ ವ್ಯವಹಾರ ಮತ್ತು ಕ್ರೀಡಾ ಸಚಿವಾಲಯದ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮೇರಾ ಯುವ ಭಾರತ್ ನವದೆಹಲಿಯಲ್ಲಿಂದು ತ್ಯಾಗರಾಜ್ ಕ್ರೀಡಾ ಸಂಕೀರ್ಣದಲ್ಲಿ ವಿಕಸಿತ ಭಾರತಕ್ಕಾಗಿ ಯುವ ಸಮುದಾಯ - ಮೈ ಭಾರತ್ ಯುವ ಸಮಾವೇಶವನ್ನು ಆಯೋಜಿಸಿದೆ. ಯುವ ನಾಯಕತ್ವ ಮತ್ತು ರಾಷ್ಟ್ರ ನಿರ್ಮಾಣದ ಪ್ರಮುಖ ಆಚರಣೆಯಲ್ಲಿ ದೇಶಾದ್ಯಂತದ ಸಾವಿರಾರು ಯುವಕರು ಭಾಗವಹಿಸಲಿದ್ದಾರೆ. ಮಧ್ಯಾಹ್ನ ನಡೆಯಲಿರುವ ಸಮಾವೇಶವನ್ನು ಪ್ರಧಾನಿ ನರೇಂದ್ರ ಮೋದಿಯವರ ೨೦೪೭ರ ವೇಳೆಗೆ ವಿಕಸಿತ ಭಾರತ ಗುರಿಯನ್ನು ಸಾಧಿಸುವಲ್ಲಿ ಪ್ರಮುಖ ಪ್ರೇರಕ ಶಕ್ತಿಯಾಗಿ ದೇಶದ ಯುವಕರನ್ನು ಒಗ್ಗೂಡಿಸಲು ಆಯೋಜಿಸಲಾಗುತ್ತಿದೆ ಎಂದು ಯುವ ವ್ಯವಹಾರ ಮತ್ತು ಕ್ರೀಡಾ ಸಚಿವಾಲಯ ತಿಳಿಸಿದೆ. ಕಾರ್ಯಕ್ರಮದಲ್ಲಿ ಭಾರತದ ವಿವಿಧ ಭಾಗಗಳಿಂದ ೬ ಸಾವಿರಕ್ಕೂ ಹೆಚ್ಚು ಯುವಕರು ಭಾಗವಹಿಸುವ ನಿರೀಕ್ಷೆಯಿದೆ. ಭಾರತದ ಯುವಕರ ವೈವಿಧ್ಯತೆ ಮತ್ತು ಆಕಾಂಕ್ಷೆಗಳನ್ನು ಪ್ರತಿಬಿಂಬಿಸುವ ವಿದ್ಯಾರ್ಥಿಗಳು, ಯುವ ವೃತ್ತಿಪರರು, ಉದ್ಯಮಿಗಳು, ನಾವೀನ್ಯಕಾರರು, ವಿಷಯ ರಚನೆಕಾರರು, ಉದಯೋನ್ಮುಖ ನಾಯಕರು, ಸಾಧಕರು ಮತ್ತು ಯುವತಿಯರು ಸೇರಿದಂತೆ ವಿವಿಧ ಹಿನ್ನೆಲೆಗಳನ್ನು ಪ್ರತಿನಿಧಿಸುವವರು ಭಾಗವಹಿಸಲಿದ್ದಾರೆ.

ಕೇಂದ್ರ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವ ಮನ್ಸುಖ್ ಮಾಂಡವಿಯಾ ಮತ್ತು ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ, ಇತರ ಹಲವಾರು ಗಣ್ಯ ನಾಯಕರು, ವಿಶೇಷ ಅತಿಥಿಗಳು ಮತ್ತು ವಿವಿಧ ವಲಯಗಳ ಯುವ ಐಕಾನ್‌ಗಳು ಸಮಾವೇಶದಲ್ಲಿ ಉಪಸ್ಥಿತರಿರುತ್ತಾರೆ.

<><><>

ಹಲವು ದೇಶಗಳು ಆರ್ಥಿಕ ಅನಿಶ್ಚಿತತೆಯನ್ನು ಎದುರಿಸುತ್ತಿರುವ ಸಮಯದಲ್ಲಿ ಭಾರತವು ಅತ್ಯಂತ ವೇಗವಾಗಿ ಬೆಳೆಯುತ್ತಿರುವ ವಿಶ್ವದ ಪ್ರಮುಖ ಆರ್ಥಿಕತೆಯಾಗಿ ಗುರುತಿಸಿಕೊಳ್ಳುತ್ತಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ೨೦೨೫-೨೬ರ ಹಣಕಾಸು ವರ್ಷದಲ್ಲಿ ಶೇಕಡ ೭.೭ರ ಜಿಡಿಪಿ ಬೆಳವಣಿಗೆ ದರವನ್ನು ಉಲ್ಲೇಖಿಸಿ, ಈ ಸಾಧನೆಯು ಕಳೆದ ೧೨ ವರ್ಷಗಳಲ್ಲಿ ನಿರ್ಮಿಸಲಾದ ಭಾರತೀಯ ಆರ್ಥಿಕತೆಯ ಸ್ಥಿತಿಸ್ಥಾಪಕತ್ವದ ಸಾಮರ್ಥ್ಯವನ್ನು ಒತ್ತಿಹೇಳುತ್ತದೆ ಎಂದು ಅವರು ಹೇಳಿದರು. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಭಾರತವು ಆರ್ಥಿಕ ಬೆಳವಣಿಗೆಯನ್ನು ಸ್ಥಿರತೆ, ವಿಶ್ವಾಸ, ಸುಸ್ಥಿರತೆ ಮತ್ತು ವಿಶ್ವಾಸಾರ್ಹತೆಯೊಂದಿಗೆ ಸಂಯೋಜಿಸಿದೆ. ರಾಷ್ಟ್ರ ನಿರ್ಮಾಣ, ನಾವೀನ್ಯತೆ, ಮೂಲಸೌಕರ್ಯ ಮತ್ತು ಉದ್ಯಮಶೀಲತೆಯ ಮೇಲೆ ಕೇಂದ್ರೀಕರಿಸುವಲ್ಲಿ ಪ್ರಧಾನಿಯವರ ಅಚಲ ಬದ್ಧತೆ ಹಾಗೂ ಅಭೂತಪೂರ್ವ ಜಾಗತಿಕ ಸವಾಲುಗಳ ಮೂಲಕ ದೇಶವನ್ನು ಮುನ್ನಡೆಸುವ ಅವರ ಸಾಮರ್ಥ್ಯವು ಭಾರತವನ್ನು ಆತ್ಮವಿಶ್ವಾಸ, ಸ್ಥಿತಿಸ್ಥಾಪಕ ಮತ್ತು ಜಾಗತಿಕವಾಗಿ ಗೌರವಿಸಲ್ಪಟ್ಟ ಆರ್ಥಿಕ ಶಕ್ತಿಯಾಗಿ ಪರಿವರ್ತಿಸಿದೆ ಎಂದು ರಕ್ಷಣಾ ಸಚಿವರು ಹೇಳಿದರು. ಜಿಡಿಪಿಯ ಗಮನಾರ್ಹ ಬೆಳವಣಿಗೆಯು ಹೊಸ ಅವಕಾಶಗಳನ್ನು ಸೃಷ್ಟಿಸುತ್ತಿದೆ ಮತ್ತು ೧೪೦ ಕೋಟಿ ಭಾರತೀಯರ ಆಕಾಂಕ್ಷೆಗಳನ್ನು ಬಲಪಡಿಸುತ್ತಿದೆ ಎಂದು ರಾಜನಾಥ್ ಸಿಂಗ್ ತಿಳಿಸಿದರು.

<><><>

ಛತ್ರಪತಿ ಶಿವಾಜಿ ಮಹಾರಾಜರ ಪಟ್ಟಾಭಿಷೇಕದ ದಿನದಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಶುಭಾಶಯ ಕೋರಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಛತ್ರಪತಿ ಶಿವಾಜಿ ಮಹಾರಾಜರು ಸ್ವಾಭಿಮಾನ, ಉತ್ತಮ ಆಡಳಿತ ಮತ್ತು ರಾಷ್ಟ್ರೀಯ ರಕ್ಷಣೆಗಳಲ್ಲಿ ಬೇರೂರಿರುವ ಆಡಳಿತ ವ್ಯವಸ್ಥೆಯನ್ನು ನಿರ್ಮಿಸಿದರು. ಇದು ಭಾರತೀಯ ಜನರಲ್ಲಿ ಹೊಸ ಆತ್ಮವಿಶ್ವಾಸವನ್ನು ತುಂಬಿತು ಎಂದು ಅವರು ಹೇಳಿದ್ದಾರೆ. ಸ್ವರಾಜ್, ಸ್ವಸಂಸ್ಕೃತಿ ಮತ್ತು ಸ್ವಧರ್ಮದ ಮೇಲಿನ ಅಚಲ ಸಮರ್ಪಣೆ, ಅದಮ್ಯ ಧೈರ್ಯ ಯುವ ಶಿವಾಜಿಯನ್ನು ಛತ್ರಪತಿಯನ್ನಾಗಿ ಪರಿವರ್ತಿಸಿತು ಎಂದು ಗೃಹ ಸಚಿವರು ತಿಳಿಸಿದ್ದಾರೆ. ಚಿಕ್ಕ ವಯಸ್ಸಿನಲ್ಲೇ, ಛತ್ರಪತಿ ಶಿವಾಜಿ ಮಹಾರಾಜರು ಹಿಂದವಿ

ಸ್ವರಾಜ್ಯವನ್ನು ಸ್ಥಾಪಿಸುವ ಪ್ರತಿಜ್ಞೆ ತೆಗೆದುಕೊಂಡು ಮೊಘಲರಿಗೆ ಸವಾಲು ಹಾಕಿದರು. ಛತ್ರಪತಿ ಶಿವಾಜಿ ಮಹಾರಾಜರ ಜೀವನವು ಇಂದಿಗೂ ಲಕ್ಷಾಂತರ ಯುವಜನರಿಗೆ ದೇಶಭಕ್ತಿ ಮತ್ತು ಸಾಂಸ್ಕೃತಿಕ ಹೆಮ್ಮೆಯ ಮನೋಭಾವದಿಂದ ಸ್ಫೂರ್ತಿ ನೀಡುತ್ತಿದೆ ಎಂದು ಅವರು ಒತ್ತಿ ಹೇಳಿದರು.

<><><>

ಭಾರತ-ಅಮೆರಿಕ ಸೇನಾ ಸಿಬ್ಬಂದಿ ಮಾತುಕತೆಯ ೨೯ನೇ ಆವೃತ್ತಿಯು ಹವಾಯಿಯಲ್ಲಿ ನಡೆಯಿತು. ಸೇನಾ ಸಿಬ್ಬಂದಿ ಉಪ ಮುಖ್ಯಸ್ಥ ಲೆಫ್ಟಿನೆಂಟ್ ಜನರಲ್ ರಾಜೀವ್ ಘಾಯ್ ಮತ್ತು ಅಮೆರಿಕ ಸೇನಾ ಪೆಸಿಫಿಕ್‌ನ ಉಪ ಕಮಾಂಡಿಂಗ್ ಜನರಲ್ ಲೆಫ್ಟಿನೆಂಟ್ ಜನರಲ್ ಜೋಯಲ್ ವೋವೆಲ್ ಅವರ ಸಹ-ಅಧ್ಯಕ್ಷತೆಯಲ್ಲಿ ಈ ಸಭೆ ನಡೆಯಿತು. ಚರ್ಚೆಗಳು, ಮುಖ್ಯವಾಗಿ ದ್ವಿಪಕ್ಷೀಯ ರಕ್ಷಣಾ ಸಹಕಾರವನ್ನು ಬಲಪಡಿಸುವುದು, ಪರಸ್ಪರ ಕಾರ್ಯಸಾಧ್ಯತೆಯನ್ನು ಹೆಚ್ಚಿಸುವುದು, ವೃತ್ತಿಪರ ವಿನಿಮಯವನ್ನು ವಿಸ್ತರಿಸುವುದು ಮತ್ತು ಹಂಚಿಕೆಯ ಭದ್ರತಾ ಹಿತಾಸಕ್ತಿಗಳನ್ನು ಬೆಂಬಲಿಸಲು ಮಿಲಿಟರಿ ಸಹಯೋಗವನ್ನು ಗಾಢವಾಗಿಸುವತ್ತ ಗಮನಹರಿಸಿದವು. ಎರಡೂ ಕಡೆಯವರು ಸೈನ್ಯ-ಸೇನೆ ನಡುವಿನ ಒಪ್ಪಂದಗಳ ಹೆಚ್ಚುತ್ತಿರುವ ವ್ಯಾಪ್ತಿಯನ್ನು ಒಪ್ಪಿಕೊಂಡರು. ಭಾರತ-ಅಮೆರಿಕ ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುವ ತಮ್ಮ ಬದ್ಧತೆಯನ್ನು ಪುನರುಚ್ಚರಿಸಿದವು.

<><><>

ಸರ್ಕಾರಿ ಭದ್ರತೆಗಳಲ್ಲಿ ವಿದೇಶಿ ಬಂಡವಾಳ ಹೂಡಿಕೆಗಳನ್ನು ನಿಯಂತ್ರಿಸುವ ನಿಯಮಗಳನ್ನು ಭಾರತೀಯ ರಿಸರ್ವ್ ಬ್ಯಾಂಕ್ ಸರಳೀಕರಿಸಿದೆ. ಪರಿಷ್ಕೃತ ಚೌಕಟ್ಟಿನಡಿಯಲ್ಲಿ, ಕೆಲವು ಹೂಡಿಕೆ ನಿರ್ಬಂಧಗಳನ್ನು ತೆಗೆದುಹಾಕಲಾಗಿರುವುದರಿಂದ ಸಾಮಾನ್ಯ ಮಾರ್ಗದ ಮೂಲಕ ಹೂಡಿಕೆ ಮಾಡುವ ವಿದೇಶಿ ಬಂಡವಾಳ ಹೂಡಿಕೆಗಳು ಮತ್ತಷ್ಟು ಸುಲಭವಾಗಲಿವೆ. ಆರ್‌ಬಿಐ ಅಸ್ತಿತ್ವದಲ್ಲಿರುವ ಸಾಮಾನ್ಯ ಮತ್ತು ದೀರ್ಘಾವಧಿ ಹೂಡಿಕೆ ವರ್ಗಗಳನ್ನು ಸರ್ಕಾರಿ ಭದ್ರತೆಗಳು ಹಾಗೂ ರಾಜ್ಯ ಸರ್ಕಾರಿ ಭದ್ರತೆಗಳಿಗೆ ಒಂದೇ ಮಿತಿಯಾಗಿ ಆರ್‌ಬಿಐ ವಿಲೀನಗೊಳಿಸಿದೆ. ಹೂಡಿಕೆಗಳನ್ನು ಸುಲಭಗೊಳಿಸುವ ಮತ್ತು ವಿದೇಶಿ ಹೂಡಿಕೆದಾರರಿಗೆ ಅನುಸರಣೆ ಅವಶ್ಯಕತೆಗಳನ್ನು ಕಡಿಮೆ ಮಾಡುವ ಗುರಿಯನ್ನು ಇದು ಹೊಂದಿದೆ.

<><><>

ನೈಋತ್ಯ ಮುಂಗಾರು ಕೇರಳಂನಲ್ಲಿ ತೀವ್ರಗೊಳ್ಳುತ್ತಿದ್ದಂತೆ, ಇದೇ ೯ ರವರೆಗೆ ರಾಜ್ಯದ ಉತ್ತರ ಜಿಲ್ಲೆಗಳಲ್ಲಿ ಅತಿ ಹೆಚ್ಚು ಮಳೆಯಾಗುವ ಮುನ್ಸೂಚನೆಯನ್ನು ಭಾರತೀಯ ಹವಾಮಾನ ಇಲಾಖೆ ನೀಡಿದೆ. ಇಂದು ಮಲಪ್ಪುರಂ, ಕೋಝಿಕ್ಕೋಡ್, ವಯನಾಡ್, ಕಣ್ಣೂರು ಮತ್ತು ಕಾಸರಗೋಡು

ಜಿಲ್ಲೆಗಳಿಗೆ ರೆಡ್ ಅಲರ್ಟ್ ನೀಡಲಾಗಿದ್ದು, ನಾಳೆಯೂ ಮಲಪ್ಪುರಂ, ಕೋಯಿಕ್ಕೋಡ್ ಮತ್ತು ವಯನಾಡ್ ಜಿಲ್ಲೆಗಳಿಗೆ ರೆಡ್ ಅಲರ್ಟ್ ನೀಡಿದೆ. ಹವಾಮಾನ ವೈಪರೀತ್ಯ ಸಾಧ್ಯತೆಯನ್ನು ಗಮನದಲ್ಲಿಟ್ಟುಕೊಂಡು, ಜಿಲ್ಲಾಧಿಕಾರಿಗಳು ನಾಲ್ಕು ಜಿಲ್ಲೆಗಳ ಶಿಕ್ಷಣ ಸಂಸ್ಥೆಗಳಿಗೆ ರಜೆ ಘೋಷಿಸಿದ್ದಾರೆ. ಪ್ರತಿಕೂಲ ಹವಾಮಾನ ಪರಿಸ್ಥಿತಿಗಳು ಪ್ರಕ್ಷುಬ್ಧವಾಗಿರುವುದರಿಂದ, ಮೀನುಗಾರರು ಬರುವ ಮಂಗಳವಾರದವರೆಗೆ ಕೇರಳ-ಲಕ್ಷದ್ವೀಪ ಮತ್ತು ಕರ್ನಾಟಕ ಕರಾವಳಿಯಲ್ಲಿ ಸಮುದ್ರಕ್ಕೆ ಇಳಿಯದಂತೆ ಸೂಚಿಸಲಾಗಿದೆ.

<><><><>

ಓಸ್ಲೋದಲ್ಲಿ ನಡೆದ ಪಂದ್ಯಾವಳಿಯಲ್ಲಿ ಗ್ರ್ಯಾಂಡ್‌ಮಾಸ್ಟರ್ ಆರ್. ಪ್ರಜ್ಞಾನಂದ ಅವರು ಜರ್ಮನಿಯ ವಿನ್ಸೆಂಟ್ ಕೀಮರ್ ವಿರುದ್ಧ ಅಂತಿಮ ಸುತ್ತಿನಲ್ಲಿ ಗೆಲುವು ಸಾಧಿಸಿ ನಾರ್ವೆ ಚೆಸ್ ಪ್ರಶಸ್ತಿಗೆ ಭಾಜನರಾದ ಮೊದಲ ಭಾರತೀಯ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಮೂರನೇ ಸ್ಥಾನದಿಂದ ದಿನವನ್ನು ಪ್ರಾರಂಭಿಸಿದ ಪ್ರಜ್ಞಾನಂದ, ಮೂರು ಅಂಕಗಳ ನಿರ್ಣಾಯಕ ಗೆಲುವು ಸಾಧಿಸಿ ೧೮ ಅಂಕಗಳೊಂದಿಗೆ ಮುಗಿಸಿ ಪ್ರಶಸ್ತಿಯನ್ನು ಮುಡಿಗೇರಿಸಿಕೊಂಡರು. ಚೆನ್ನೈನ ೨೦ ವರ್ಷದ ಪ್ರಜ್ಞಾನಂದ, ೨೦೧೩ ರಲ್ಲಿ ಪಂದ್ಯಾವಳಿ ಪ್ರಾರಂಭವಾದಾಗಿನಿಂದ ಭಾರತೀಯ ಚೆಸ್ ದಂತಕಥೆ ವಿಶ್ವನಾಥನ್ ಆನಂದ್ ಮತ್ತು ಹಾಲಿ ವಿಶ್ವ ಚಾಂಪಿಯನ್ ಡಿ. ಗುಕೇಶ್ ಅವರಿಂದಲೂ ಸಾಧ್ಯವಾಗದ್ದನ್ನು ಸಾಧಿಸಿದ್ದಾರೆ. ನಾರ್ವೆ ಚೆಸ್‌ನಲ್ಲಿ ಎರಡನೇ ಬಾರಿಗೆ ಸ್ಪರ್ಧಿಸುತ್ತಿರುವ ಪ್ರಜ್ಞಾನಂದ, ಈ ಟೂರ್ನಿಯ ಸಮಯದಲ್ಲಿ ವಿಶ್ವದ ಅಗ್ರ ಶ್ರೇಯಾಂಕಿತ ಮ್ಯಾಗ್ನಸ್ ಕಾರ್ಲ್‌ಸೆನ್ ವಿರುದ್ಧ ಎರಡು ಗೆಲುವುಗಳನ್ನು ಒಳಗೊಂಡಂತೆ ಬಲವಾದ ಫಿನಿಶ್ ಅನ್ನು ಗಳಿಸಿದರು.

<><><><>

ನವ ಚಂಡಿಗಢದಲ್ಲಿನ ಮುಲ್ಲನಪುರದ ಮಹಾರಾಜ ಯಾದವೀಂದ್ರ ಸಿಂಗ್ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಭಾರತ ಮತ್ತು ಅಫ್ಘಾನಿಸ್ತಾನದ ನಡುವಿನ ಟೆಸ್ಟ್ ಪಂದ್ಯದಲ್ಲಿ ಟಾಸ್ ಗೆದ್ದ ಭಾರತ ಬ್ಯಾಟಿಂಗ್ ಆಯ್ಕೆ ಮಾಡಿಕೊಂಡಿದೆ. ಇತ್ತೀಚಿನ ವರದಿ ಬಂದಾಗ ಭಾರತ ೧ ವಿಕೆಟ್ ನಷ್ಟಕ್ಕೆ ೧೫೪ ರನ್ ಗಳಿಸಿ ಆಡುತ್ತಿದೆ.  ಉಭಯ ತಂಡಗಳ ನಡುವೆ ೮ ವರ್ಷಗಳ ನಂತರ ನಡೆಯುತ್ತಿರುವ ಮೊದಲ ಟೆಸ್ಟ್ ಪಂದ್ಯ ಇದಾಗಿದೆ. ಭಾರತ ತಂಡವನ್ನು ನಾಯಕ ಶುಭ್‌ಮನ್ ಗಿಲ್ ಮುನ್ನಡೆಸುತ್ತಿದ್ದಾರೆ.

<><><><>

ಜಪಾನ್‌ನ ಕಾಕಮಿಗಹರಾದಲ್ಲಿ ನಡೆಯಲಿರುವ ಪುರುಷರ ಹದಿನೆಂಟು ವರ್ಷದೊಳಗಿನವರ ಏಷ್ಯಾ ಕಪ್ ಹಾಕಿ ೨೦೨೬ರ ಫೈನಲ್‌ನಲ್ಲಿಂದು ಭಾರತ ಮತ್ತು ಜಪಾನ್ ತಂಡಗಳ

ಮುಖಾಮುಖಿಯಾಗಲಿದೆ. ಪಂದ್ಯ ಭಾರತೀಯ ಕಾಲಮಾನ ಮಧ್ಯಾಹ್ನ ೩.೩೦ ಕ್ಕೆ ಆರಂಭವಾಗಲಿದೆ. ನಿನ್ನೆ ಭಾರತ, ಎರಡನೇ ಸೆಮಿಫೈನಲ್‌ನಲ್ಲಿ ೫-೩ ಗೋಲುಗಳಿಂದ ತನ್ನ ಸಾಂಪ್ರದಾಯಿಕ ಎದುರಾಳಿ ಪಾಕಿಸ್ತಾನವನ್ನು ಪರಾಭವಗೊಳಿಸಿತ್ತು. ಮೊದಲ ಸೆಮಿಫೈನಲ್‌ನಲ್ಲಿ ಮಲೇಷ್ಯಾ ವಿರುದ್ಧ ೮-೧ ಗೋಲುಗಳ ಅಂತರದಿಂದ ಜಯಗಳಿಸುವ ಮೂಲಕ ಜಪಾನ್ ಫೈನಲ್‌ಗೆ ತನ್ನ ಸ್ಥಾನವನ್ನು ಕಾಯ್ದಿರಿಸಿತ್ತು. ಪಾಕಿಸ್ತಾನವು ಮೂರನೇ ಸ್ಥಾನಕ್ಕಾಗಿ ನಡೆಯುವ ಪಂದ್ಯದಲ್ಲಿ ಮಲೇಷ್ಯಾವನ್ನು ಎದುರಿಸಲಿದೆ.

<><><>

ಗೋವಾದ ಮಾರ್ಗೋವಾದಲ್ಲಿಂದು ನಡೆಯಲಿರುವ ಸ್ಯಾಫ್ ಮಹಿಳಾ ಫುಟ್ಬಾಲ್ ಚಾಂಪಿಯನ್‌ಶಿಪ್‌ನ ಫೈನಲ್ ಪಂದ್ಯದಲ್ಲಿ ಭಾರತ ತಂಡ, ಬಾಂಗ್ಲಾದೇಶವನ್ನು ಎದುರಿಸಲಿದೆ. ಪಂದ್ಯ ಸಂಜೆ ೬:೩೦ಕ್ಕೆ ಆರಂಭವಾಗಲಿದೆ. ಸೆಮಿಫೈನಲ್‌ನಲ್ಲಿ ಭೂತಾನ್ ತಂಡವನ್ನು ೧-೦ ಅಂತರದಿಂದ ಸೋಲಿಸುವ ಮೂಲಕ ಭಾರತ ಫೈನಲ್‌ಗೆ ತನ್ನ ಸ್ಥಾನವನ್ನು ಖಚಿತಪಡಿಸಿಕೊಂಡಿದೆ. ಭಾರತ ಇದುವರೆಗೆ ಐದು ಬಾರಿ ಈ ಪ್ರಶಸ್ತಿಯನ್ನು ಗೆದ್ದಿದೆ.

<><><>

೨೦೨೮ರ ಪದ್ಮ ಪ್ರಶಸ್ತಿಗಳಿಗೆ ನಾಮನಿರ್ದೇಶನಗಳನ್ನು ಮುಂದಿನ ತಿಂಗಳ ೩೧ರವರೆಗೆ ಸಲ್ಲಿಸಬಹುದಗಿದೆ. ಮಾರ್ಚ್ ೧೫ರಂದು ಪ್ರಾರಂಭವಾದ ಪದ್ಮ ಪ್ರಶಸ್ತಿಗಳಿಗೆ ನಾಮನಿರ್ದೇಶನ ಮತ್ತು ಶಿಫಾರಸ್ಸುಗಳನ್ನು ರಾಷ್ಟ್ರೀಯ ಪುರಸ್ಕಾರ ಪೋರ್ಟಲ್‌ನಲ್ಲಿ ಆನ್‌ಲೈನ್‌ನಲ್ಲಿ ಮಾತ್ರ ಸ್ವೀಕರಿಸಲಾಗುವುದು ಎಂದು ಗೃಹ ಸಚಿವಾಲಯ ತಿಳಿಸಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>